ಊ) ೧೯೯೧-೯೨ನೇ ಸಾಲಿನಲ್ಲಿ ಇಂಜಾಲಾ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಪರಿಶೀಲಿಸಲಾಗುವುದು.

ಬಂಗಾರಪೇಟೆ ತಾಲ್ಲೂಕು ಬೇತಮಂಗಲ ಕಂಬೈಂಡ್ ಆಸ್ಪತ್ರೆ ತೆರೆಯುವುದು.

2917 - ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕು ಬೇತಮಂಗಲದಲ್ಲಿ ಕಂಬೈಂಡ್ ಆಸ್ಪತ್ರೆಯನ್ನು ತೆರೆಯಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ?

ಆ) ಇಲ್ಲದಿದ್ದಲ್ಲಿ, ಸರ್ಕಾರವು ಹೆಚ್ಚಿನ ರೋಗಿಗಳಿಗೆ ಸಹಾಯವಾಗುವಂತೆ ಪ್ರಸ್ತಾವಿತ ಆಸ್ಪತ್ರೆಯನ್ನು ತೆರೆಯುವ ಉದ್ದೇಶವಿದೆಯೇ?

ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮನವಿಯು ಬಂದಿರುತ್ತದೆ.

ಆ) ಮನವಿಯನ್ನು ಕೋಲಾರ ಜಿಲ್ಲಾ ಪರಿಷತ್‌ನೊಡನೆ ಸಮಾಲೋಚನೆ ಮಾಡಿ ಪರಿಶೀಲಿಸಲಾಗುವುದು.

ಕರ್ನಾಟಕ ವಿಧಾನಸಭೆ

ಹಿಂದುಳಿದ ವರ್ಗಗಳ ಬಗ್ಗೆ ನ್ಯಾಯಮೂರ್ತಿ ಚಿನ್ನಪ್ಪರೆಡ್ಡಿ ಆಯೋಗವು ಮಾಡಿರುವ ಶಿಫಾರಸ್ಸಿನ ಬಗ್ಗೆ.

2418 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಹಿಂದುಳಿದ ವರ್ಗಗಳ ಬಗ್ಗೆ ನ್ಯಾಯಮೂರ್ತಿ ಓ. ಚಿನ್ನಪ್ಪರೆಡ್ಡಿ ಆಯೋಗವು ಮಾಡಿರುವ ಶಿಫಾರಸ್ಸುಗಳಲ್ಲಿ ಅನೇಕ ಹಿಂದುಳಿದ ವರ್ಗಗಳು ಬಿಟ್ಟು ಹೋಗಿರುವುದು ನಿಜವೇ?

ಆ) ಹಾಗಿದ್ದಲ್ಲಿ ಹಿಂದುಳಿದ ವರ್ಗಗಳಿಗೆ ನ್ಯಾಯ ದೊರಕಿಸಲು ಸರ್ಕಾರವು ನ್ಯಾಯಮೂರ್ತಿ ಚಿನ್ನಪ್ಪರೆಡ್ಡಿ ಆಯೋಗದ ವರದಿಯನ್ನು ಪರಿಶೀಲಿಸಲು ಎಲ್ಲಾ ವರ್ಗಗಳಿಗೆ ಸೂಕ್ತ ಪ್ರಾತಿನಿಧ್ಯವನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು)

ಅ) ಹೌದು

ಆ) ನ್ಯಾಯಮೂರ್ತಿ ಓ. ಚಿನ್ನಪ್ಪರೆಡ್ಡಿಯವರ ಆಯೋಗದ ಶಿಫಾರಸ್ಸುಗಳನ್ನು ಪರಿಶೀಲಿಸಲು ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ಈಗಾಗಲೇ ರಚಿಸಿರುವುದರಿಂದ ಮತ್ತೊಂದು ಪರಿಶೀಲನಾ ಸಮಿತಿಯನ್ನು ರಚಿಸುವ ಅಗತ್ಯತೆ ಇರುವುದಿಲ್ಲ.

ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು, ಮಾನ್ಯ ಮುಖ್ಯಮಂತ್ರಿಗಳು ಈಗ ಕಾಗದಪತ್ರಗಳನ್ನು ಮಂಡಿಸಬೇಕು.

(ಯಾರೂ ಮಂಡಿಸಲಿಲ್ಲ)